ವಿಶೇಷ ಸೂಚನೆಗಳು:–

ಎ) ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳು ಸ್ಥಳೀಯ ವೃಂದದ ಹುದ್ದೆ ಹಾಗೂ ಮಿಕ್ಕುಳಿದ ವೃಂದದ (ಪರಸ್ಥಳೀಯ) ಹುದ್ದೆ ಈ ಎರಡೂ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಬಿ) ಒಂದು ವೇಳೆ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಯು ಪ್ರಸ್ತುತ ನೇಮಕಾತಿಗೆ ಸಂಬಂಧಿಸಿದಂತೆ ಮಿಕ್ಕುಳಿದ (ಪರಸ್ಥಳೀಯ) ವೃಂದದ ಹುದ್ದೆಯನ್ನು ಆಯ್ಕೆ ಮಾಡಿಕೊಂಡು ನೇಮಕಾತಿ ಹೊಂದಿದಲ್ಲಿ ಅಂತಹ ಅಭ್ಯರ್ಥಿಯು ಜಾರಿಯಲ್ಲಿರುವ ನಿಯಮದಂತೆ ತನ್ನ ಸೇವಾ ಅವಧಿಯಲ್ಲಿ ಅನುಚ್ಛೇದ 371 (ಜೆ) ಮೀಸಲಾತಿ ಸೌಲಭ್ಯಗಳನ್ನು ಪಡೆಯಲು ಅವಕಾಶವಿರುವುದಿಲ್ಲ ಎಂಬುದನ್ನು ಸ್ಪಷ್ಟೀಕರಿಸಲಾಗಿದೆ.

ಸಿ) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವು ಮುಕ್ತಾಯವಾದ ನಂತರ 10 ದಿನಗಳ ಕಾಲಾವಕಾಶ ನೀಡಲಾಗುತ್ತಿದ್ದು, ಸದರಿ ದಿನಾಂಕದೊಳಗಾಗಿ ಅಭ್ಯರ್ಥಿಯು ತಾನು ಸಲ್ಲಿಸಿರುವ ಅರ್ಜಿಯಲ್ಲಿ ಹೆಸರು, ಜನ್ಮ ದಿನಾಂಕ, ಕೋರಿರುವ ಮೀಸಲಾತಿ ಹಾಗೂ ಇತರೆ ಯಾವುದೇ ಅಂಶಗಳ ಬದಲಾವಣೆ ಮಾಡಬೇಕಾದಲ್ಲಿ ಖುದ್ದಾಗಿ / ಅಂಚೆ ಮೂಲಕ ಸಂಬಂಧಪಟ್ಟ ದೃಢೀಕೃತ ದಾಖಲೆಗಳೊಂದಿಗೆ ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ನೇಮಕಾತಿ ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು ರವರ ಕಛೇರಿಗೆ ಸಲ್ಲಿಸತಕ್ಕದ್ದು. ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಸಲ್ಲಿಸುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.